ಮತ್ತು ಕಲಬುರಗಿಯಲ್ಲಿ ಕಿದ್ವಾಯಿ ಪ್ರಾದೇಶಿಕ ಕ್ಯಾನ್ಸರ್ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಬೆಳಗಾವಿಯಲ್ಲಿ ಕಿದ್ವಾಯಿ ಪ್ರಾದೇಶಿಕ ಕ್ಯಾನ್ಸರ್ ಕೇಂದ್ರವನ್ನು 50 ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲಾಗುವುದು.

133. ಕ್ಯಾನ್ಸರ್ ರೋಗಿಗಳಿಗೆ ಕಿಮೋಥೆರಪಿ ಸೌಕರ್ಯವನ್ನು ಒದಗಿಸಲು ಆಯ್ದ 10 ವೈದ್ಯಕೀಯ ವಿಜ್ಞಾನ ಸಂಸ್ಥೆಗಳಲ್ಲಿ Infusion Center ಗಳನ್ನು ಸ್ಥಾಪಿಸಲಾಗುವುದು.

134. ದಿವಂಗತ ಪುನೀತ್ ರಾಜಕುಮಾರ್ ಮತ್ತು ಸಂಚಾರಿ ವಿಜಯ್ ಅವರು ತಮ್ಮ ಅಂಗಾಂಗಗಳನ್ನು ದಾನ ಮಾಡಿ ಸಾರ್ಥಕತೆಯನ್ನು ಮೆರೆದಿದ್ದಾರೆ. ಅದರಂತೆಯೇ ಮರಣಾನಂತರ ಅಂಗಾಂಗಗಳನ್ನು ದಾನ ಮಾಡುವಂತೆ ಸಾರ್ವಜನಿಕರನ್ನು ಪ್ರೇರೇಪಿಸಲಾಗುವುದು. ಇದಕ್ಕೆ ಪೂರಕವಾಗಿ ಈಗಾಗಲೇ ಬೆಂಗಳೂರಿನಲ್ಲಿ Institute of Gastroenterology and Organ Transplant ಸಂಸ್ಥೆಯನ್ನು ಲೋಕಾರ್ಪಣೆ ಮಾಡಿದ್ದು, ಪ್ರಸಕ್ತ ಸಾಲಿನಲ್ಲಿ ನಿಮ್ಹಾನ್ಸ್ ಮೂಲಕ ಅಂಗಾಂಗ ಮರುಪಡೆಯುವಿಕೆ ಕೇಂದ್ರವನ್ನು ಪ್ರಾರಂಭಿಸಲಾಗುವುದು.

135. ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯು 2024 ರಲ್ಲಿ ಶತಮಾನೋತ್ಸವ ಆಚರಿಸುವ ಹಿನ್ನಲೆಯಲ್ಲಿ, ಕೆ.ಆರ್. ಆಸ್ಪತ್ರೆಯ ಕಟ್ಟಡಗಳ ನವೀಕರಣವನ್ನು ಮುಂದಿನ ಮೂರು ವರ್ಷದಲ್ಲಿ 89 ಕೋಟಿ ರೂ.ಗಳ ವೆಚ್ಚದಲ್ಲಿ ಕೈಗೊಳ್ಳಲಾಗುವುದು.